ಕರ್ನಾಟಕ ವಿಧಾನ ಸಭೆ

ಮಂಗಳವಾರ, ೧೯ನೇ ಆಗಸ್ಟ್ ೧೯೬೬

ಸದನವು ವಿಧಾನಸೌಧದಲ್ಲಿರುವ ವಿಧಾನಸಭೆಯ ಸಭಾಂಗಣದಲ್ಲಿ ಬೆಳಿಗ್ಗೆ ೧೧-೦೦ ಘಂಟೆ ೭ ನಿಮಿಷಕ್ಕೆ ಸಮಾವೇಶಗೊಂಡಿತು.

ಮಾನ್ಯ ಅಧ್ಯಕ್ಷರು (ಶ್ರೀ ಬಿ. ಜಿ. ಬಣಕಾರ್) ಅವರು ಪೀಠವನ್ನು ಅಲಂಕರಿಸಿದ್ದರು.

ಸಂತಾಪ ಸೂಚನೆ

ಅಧ್ಯಕ್ಷರು.—ಮಾಜಿ ಶಾಸಕರಾದ ಶ್ರೀ ಡಿ. ಗೋವಿಂದ ದಾಸ್ ಅವರು ದಿನಾಂಕ ೧೮ನೇ ಆಗಸ್ಟ್ ೧೯೬೬ರಂದು ನಿಧನರಾದರೆಂದು ಈ ಸಭೆಗೆ ತಿಳಿಸಲು ವಿಷಾದಿಸುತ್ತೇನೆ. ಶ್ರೀಯುತರು ೧೯೪೫ ರಿಂದ ೧೯೪೯ರವರೆಗೆ ಪ್ರಜಾಪ್ರತಿನಿಧಿ ಸಭೆಯ ಸದಸ್ಯರಾಗಿ, ೧೯೪೯ರಿಂದ ೧೯೫೦ರವರೆಗೆ ಸಂವಿಧಾನ ಸಭೆಯ ಸದಸ್ಯರಾಗಿ ಹಾಗೂ ೧೯೫೦ರಿಂದ ೧೯೫೧ರವರೆಗೆ ಕರ್ನಾಟಕ ವಿಧಾನಸಭೆಯ ಸದಸ್ಯರಾಗಿ ಸೇವೆ ಸಲ್ಲಿಸಿರುತ್ತಾರೆ.

ನಿಧನ ಹೊಂದಿದ ಸದಸ್ಯರ ಗೌರವದ ಅಂಗವಾಗಿ ಮಾನ್ಯ ಸದಸ್ಯರುಗಳು ಎದ್ದುನಿಂತು ಒಂದು ನಿಮಿಷ ಮೌನವನ್ನು ಆಚರಿಸಬೇಕೆಂದು ಕೇಳಿಕೊಳ್ಳುತ್ತೇನೆ.

(ಸದಸ್ಯರು ಎದ್ದುನಿಂತು ಒಂದು ನಿಮಿಷ ಮೌನವನ್ನು ಆಚರಿಸಿದರು)

ಅಧ್ಯಕ್ಷರು.—ಈ ಸಭೆಯಲ್ಲಿ ಅಂಗೀಕರಿಸಿದ ಸಂತಾಪ ಸೂಚನೆಯನ್ನು ಅಗಲಿದ ಸದಸ್ಯರ ಕುಟುಂಬದವರಿಗೆ ಕಳುಹಿಸಿಕೊಡಲಾಗುವುದು.

ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ನೀಡಲಾದ ಬಾಯಿಮಾತಿನ ಉತ್ತರಗಳು

ರಾಜ್ಯದ ಕಾನೂನಿನ ನೆರವು ವಂಡಳಿಯಲ್ಲಿ ಇತ್ಯರ್ಥವಾದ ಪ್ರಕರಣಗಳ ಬಗ್ಗೆ

೨೧ (೩೧೦) ಶ್ರೀ ಜ್ಞಾನದೇವದೊಡ್ಡಮೇಟಿ (ರೋಣ).—ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಆಹಾರ ಮತ್ತು ನಾಗರೀಕ ಸರಬರಾಜು ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೇ ?

ಅ) ರಾಜ್ಯದಲ್ಲಿ ಕಾನೂನು ನೆರವಿನ ಸಮಿತಿಯು ನೆರವಿನಿಂದ ಇತ್ಯರ್ಥವಾದ ಪ್ರಕರಣಗಳೆಷ್ಟು ಹಾಗೂ ಯಾವ್ಯಾವ ಸ್ವರೂಪದವು ?

ಆ) ರೋಣ ತಾಲ್ಲೂಕಿನ ಕಾನೂನು ನೆರವು ಸಮಿತಿಗೆ ಬಂದ ಪ್ರಕರಣಗಳೆಷ್ಟು, ಹಾಗೂ ಅಲ್ಲಿಯ ಕಾರ್ಯವಿಧಾನ ತೃಪ್ತಿಕರವಾಗಿದೆಯೆ?

ಇ) ಹಾಗಿಲ್ಲದಿದ್ದಲ್ಲಿ ಆ ಬಗ್ಗೆ ಸರ್ಕಾರದವರು ಕೈಗೊಂಡ ಕ್ರಮಗಳೇನು ?

ಶ್ರೀ ಎ.ಲಕ್ಷ್ಮೀಸಾಗರ್(ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಆಹಾರ ಮಂತ್ರಿಗಳು)

ಅ) ೨೫೭೭ ಸಿವಿಲ್ ಕ್ರಿಮಿನಲ್, ನ್ಯಾಯಾಧಿಕರಣ ಮತ್ತು ಇತರೆ.

ಆ) ೧೯ ತೃಪ್ತಿಕರವಾಗಿ ಕಂಡು ಬಂದಿಲ್ಲ.